ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ರಾಮನಗರ ಜಿಲ್ಲೆಯ ವ್ಯಾಪ್ತಿಯ ಕೆರೆಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1264 (1430) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಕೆರೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಾಗಡಿ ತಾಲ್ಲೂಕು ಕುದೂರು ಹೋಬಳಿಯ ಮಲ್ಲಪ್ಪನಹಳ್ಳಿಯ ವಿಸ್ತೀರ್ಣ ಎಷ್ಟು ಕೆರೆಯ ಪ್ರದೇಶವನ್ನು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಒತ್ತುವರಿ ಆಗಿರುವ ಪ್ರದೇಶ ಎಷ್ಟು ; ಒತ್ತುವರಿದಾರರ ಮಾಹಿತಿ ನೀಡುವುದು ಒತ್ತುವರಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಒತ್ತುವರಿ ತೆರವುಗೊಂಡಿರುವ ಪ್ರದೇಶ ಎಷ್ಟು ; ಒತ್ತುವರಿದಾರರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಉ) ಒತ್ತುವರಿ ತೆರವುಗೊಂಡ ನಂತರ ಕೆರೆಯ ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?